# ಕೃಷ್ಣಾ ಮೇಲ್ದಂಡೆ ಯೋಜನೆಗೆ ₹10 ಸಾವಿರ ಕೋಟಿ ಅನುದಾನ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು 7/3/2020

ಈ ಬಾರಿಯ ಬಜೆಟ್‌ನಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗೆ ಅನುದಾನ ನೀಡಿಲ್ಲವೆನ್ನುವುದು ಆಡಳಿತ ಪಕ್ಷದಲ್ಲಿ ಭಾರಿ ಅಸಮಾಧಾನಕ್ಕೆ ಕಾರಣವಾಗುತ್ತಿದ್ದಂತೆ, ಇದೀಗ 10 ಸಾವಿರ ಕೋಟಿ ರು. ನೀಡುವುದಾಗಿ ಮುಖ್ಯಮಂತ್ರಿ ಯಡಿಯೂರಪ್ಪ ಘೋಷಿಸಿದ್ದಾರೆ.

ಗುರುವಾರ ಯಡಿಯೂರಪ್ಪ ಅವರು ಮಂಡಿಸಿದ ಬಜೆಟ್‌ನಲ್ಲಿ ನೀರಾವರಿ ಇಲಾಖೆಗೆ ಭಾರಿ ಅನುದಾನ ನೀಡಿದ್ದರೂ, ಬಾಗಲಕೋಟೆ ಭಾಗದ ಕನಸಿನ ಯೋಜನೆಯಾಗಿದ್ದ ಕೃಷ್ಣಾ ಮೇಲ್ದಂಡೆ ಯೋಜನೆಗೆ ಯಾವುದೇ ಅನುದಾನ ನೀಡಿರಲಿಲ್ಲ. ಇದಕ್ಕೆ ಬಿಜೆಪಿ ಶಾಸಕರು ಸೇರಿದಂತೆ ಸ್ವತಃ ಯಡಿಯೂರಪ್ಪ ಕ್ಯಾಬಿನೆಟ್‌ನಲ್ಲಿರುವ ಹಿರಿಯ ಸಚಿವರು ಭಾರಿ ವಿರೋಧ ವ್ಯಕ್ತಪಡಿಸಿದ್ದರು. ಈ ಅಸಮಾನತೆಯನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ ಎನ್ನುವ ಮಾತನ್ನು ಹೇಳಿದ್ದರು. ಆದ್ದರಿಂದ ಈ ವಿವಾದವನ್ನು ಚಿವುಟಿ ಹಾಕಲು ಹೆಚ್ಚುವರಿ 10 ಸಾವಿರ ಕೋಟಿ ರು. ಘೋಷಣೆ ಮಾಡಿದ್ದಾರೆ.

ಈ ಬಗ್ಗೆ ವಿಧಾನಸಭೆಯಲ್ಲಿ ಮಾತನಾಡಿದ ಅವರು, ಕೃಷ್ಣಾ ಮೇಲ್ದಂಡೆ ಮೂರನೇ ಹಂತದ ಯೋಜನೆಗಳ ಕಾಮಗಾರಿಗಳಿಗೆ 10 ಸಾವಿರ ಕೋಟಿ ರು. ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಲು ನಿರ್ಧರಿಸಲಾಗಿದೆ. ಈ ಯೋಜನೆಗೆ ಹಣ ನೀಡಬೇಕೆಂಬುದು ಎಲ್ಲರ ಒತ್ತಾಯವಾಗಿತ್ತು. ಆದ್ದರಿಂದ ಈ ವಿಚಾರವಾಗಿ ಹಣಕಾಸು ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, 3ನೇ ಹಂತದ ಕಾಮಗಾರಿಗೆ ಮತ್ತು 20 ಹಳ್ಳಿಗಳ ಪುನರ್ವಸತಿ, ಪುನರ್ ನಿರ್ಮಾಣಕ್ಕೆ 2020-21ನೇ ಸಾಲಿನಲ್ಲಿ 10 ಸಾವಿರ ಕೋಟಿ ರು. ನೀಡಲು ನಿರ್ಧರಿಸಲಾಗಿದೆ. ಈ ಯೋಜನೆಯನ್ನು ಮುಂದಿನ ಮೂರು ವರ್ಷಗಳಲ್ಲಿ ಪೂರ್ಣಗೊಳಿಸಲಾಗುವುದು. ಸಂಪನ್ಮೂಲ ಕ್ರೋಢೀಕರಣದಲ್ಲಿ ಕೊರತೆಯಾಗದಂತೆ ಎಚ್ಚರಿಕೆ ವಹಿಸಲಾಗಿದೆ. ಅಗತ್ಯವಿರುವ ಕಡೆಯಿಂದ ಹಣಕಾಸು ಹೊಂದಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.



"ಕೃಷ್ಣಾ ಮೇಲ್ದಂಡೆ ಯೋಜನೆ ಜಾರಿಗೆ ಬರಬೇಕು. ಹಣಕಾಸು ಕೊರತೆಯಾಗದಂತೆ ಎಚ್ಚರಿಕೆ ವಹಿಸಿದ್ದೇನೆ. ಕಾಮಗಾರಿಗಳನ್ನು ಆರಂಭಿಸಲು ತಕ್ಷಣ ಪ್ರಯತ್ನ ಮಾಡುತ್ತೇನೆ."

– ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ



"ಬಜೆಟ್ ಮಂಡನೆಯಲ್ಲಿ ಈ ಬಗ್ಗೆ ಪ್ರಸ್ತಾಪವಿಲ್ಲ. ಎಲ್ಲರಿಂದ ಒತ್ತಡ ಬಂದಿದೆ ಎಂಬ ಕಾರಣಕ್ಕಾಗಿ ಅಧಿಕಾರಿಗಳ ಜತೆ ಚರ್ಚಿಸಿ, ಹಣ ನೀಡುತ್ತೇವೆ ಎಂದು ಹೇಳುತ್ತಿದ್ದಾರೆ. ಹಣ ಕೊಡುವುದಾದರೆ ಸ್ವಾಗತವಿದೆ. ಆದರೆ ಯಡಿಯೂರಪ್ಪ ಅವರ ಸರಕಾರದಲ್ಲಿ ದುಡ್ಡೇ ಇಲ್ಲ. ಕೇವಲ ಮೂಗಿಗೆ ತುಪ್ಪ ಹಚ್ಚಿ ಆ ಭಾಗದ ಜನರನ್ನು ಯಾಮಾರಿಸುವ ಪ್ರಯತ್ನ ಮಾಡುತ್ತಿದ್ದಾರೆ."

– ಸಿದ್ದರಾಮಯ್ಯ ಪ್ರತಿಪಕ್ಷದ ನಾಯಕ

## ಹಿಂದಿನ ಸರಕಾರ ಒಂದು ರುಪಾಯಿ ಕೂಡ ನೀಡಿಲ್ಲ



ಈ ಕುರಿತು ಸದನದಲ್ಲಿ ಚರ್ಚೆಸುವ ವೇಳೆ ಮಧ್ಯಪ್ರವೇಶ ಮಾಡಿದ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಬ್ರಿಜೇಶ್ ಪಟೇಲ್ ಅವರ ಸಮಿತಿ ಕರ್ನಾಟಕಕ್ಕೆ ಕೃಷ್ಣಾ ನದಿ ಪಾತ್ರದಿಂದ 173 ಟಿಎಂಸಿ ನೀರು ಹಂಚಿಕೆ ಮಾಡಿ ಏಳು ವರ್ಷ ಕಳೆದಿದೆ. ಹಿಂದಿನ ಸರಕಾರ ಒಂದು ರುಪಾಯಿ ಕೂಡ ಕೊಡಲಿಲ್ಲ. 2012-13ನೇ ಸಾಲಿನಲ್ಲಿ ಜಗದೀಶ್ ಶೆಟ್ಟರ್ ನೇತೃತ್ವದ ಸರಕಾರ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾಮಗಾರಿಗೆ 17,207 ಕೋಟಿಗಳನ್ನು ನಿಗದಿ ಮಾಡಿ ಕ್ರಿಯಾ ಯೋಜನೆ ರೂಪಿಸಿತ್ತು. ನೂತನ ಸರಕಾರಗಳು 1.32 ಲಕ್ಷ ಹೆಕ್ಟೇರ್ ಭೂಮಿಗೆ ಪರಿಹಾರ ನೀಡಿದ್ದರೆ ಈ ವೇಳೆಗಾಗಲೇ ಆಲಮಟ್ಟಿಯ ಎತ್ತರ 520 ಸಾವಿರ ಮೀಟರ್‌ನಿಂದ 524 ಮೀಟರ್ ಏರುತ್ತಿತ್ತು. ಜಲಾಶಯದಲ್ಲಿ ನೀರು ನಿಲ್ಲುತ್ತಿತ್ತು ಎಂದು ಸ್ಪಷ್ಟೀಕರಣ ನೀಡಿದರು.